Akashvani: Bangalore
National Bulletin In Kannada
29.04.2026: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
********

ಮುಖ್ಯಾಂಶಗಳು :

- ಪಶ್ಚಿಮ ಬಂಗಾಳದ ೧೪೨ ಕ್ಷೇತ್ರಗಳಲ್ಲಿ ಇಂದು ಎರಡನೇ ಹಂತದ ವಿಧಾನಸಭಾ ಚುನಾವಣೆ; ಮತದಾನ ಪ್ರಗತಿಯಲ್ಲಿ
- ಉತ್ತರ ಪ್ರದೇಶದ ಹಾರ್ದೋಯ್‌ನಲ್ಲಿಂದು ಗಂಗಾ ಎಕ್ಸ್‌ಪ್ರೆಸ್‌ವೇಯನ್ನು ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ
- ಈ ತಿಂಗಳ ೨೫ರಂದು ಭಾರತ ತನ್ನ ಸಾರ್ವಕಾಲಿಕ ಗರಿಷ್ಠ ವಿದ್ಯುತ್ ಬೇಡಿಕೆಯಾದ ೨೫೬ ಗಿಗಾವ್ಯಾಟ್‌ಗಿಂತ ಹೆಚ್ಚಿನ ಮಟ್ಟದ ಯಶಸ್ವಿ ಪೂರೈಕೆ - ವಿದ್ಯುತ್ ಸಚಿವಾಲಯ
- ಐಪಿಎಲ್ ಟಿ-೨೦ ಕ್ರಿಕೆಟ್; ಪಂಜಾಬ್ ಕಿಂಗ್ಸ್ ತಂಡದ ವಿರುದ್ಧ ರಾಜಸ್ತಾನ್ ರಾಯಲ್ಸ್‌ಗೆ ೬ ವಿಕೆಟ್‌ಗಳ ಜಯ

**********

ಪಶ್ಚಿಮ ಬಂಗಾಳದಲ್ಲಿ ಇಂದು ಎರಡನೇ ಹಂತದ ವಿಧಾನಸಭಾ ಚುನಾವಣೆಯ ಮತದಾನ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಚುನಾವಣೆ ನಡೆಯಲಿರುವ ೧೪೨ ಕ್ಷೇತ್ರಗಳಲ್ಲಿ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ. ಮುಕ್ತ ಮತ್ತು ಶಾಂತಿಯುತ ಮತದಾನವನ್ನು ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗ ನೀಡಿರುವ ನಿರ್ದೇಶನದಂತೆ ಪೊಲೀಸರು ತೀವ್ರ ಬಂದೋಬಸ್ತ್ ಕೈಗೊಂಡಿದ್ದಾರೆ. ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಕೇಂದ್ರ ಪಡೆಗಳು ವಿವಿಧ ಜಿಲ್ಲೆಗಳಲ್ಲಿ ಪಥಸಂಚಲನ, ರೂಟ್‌ಮಾರ್ಚ್ ಮತ್ತು ಚೆಕ್‌ಪೋಸ್ಟ್ ತಪಾಸಣೆಯನ್ನು ನಡೆಸಿವೆ. ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ಅಡಚಣೆಗಳನ್ನು ತಡೆಗಟ್ಟಲು ಕಟ್ಟುನಿಟ್ಟಿನ ಮೇಲ್ವಿಚಾರಣೆ ಮತ್ತು ಕ್ಷಿಪ್ರ ಪ್ರತಿಕ್ರಿಯೆ ವ್ಯವಸ್ಥೆಗಳನ್ನು ಸಕ್ರಿಯಗೊಳಿಸಲಾಗಿದೆ.

ಮತದಾನವನ್ನು ಮೇಲ್ವಿಚಾರಣೆ ಮಾಡಲು ಪ್ರತಿ ಮತಗಟ್ಟೆಯಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ.

**********

ಪಶ್ಚಿಮ ಬಂಗಾಳದಲ್ಲಿ ಇಂದು ಎರಡನೇ ಮತ್ತು ಅಂತಿಮ ಹಂತದ ವಿಧಾನಸಭಾ ಚುನಾವಣೆ ನಡೆಯುತ್ತಿದೆ. ಮತದಾನ ಪ್ರಕ್ರಿಯೆ ಬೆಳಿಗ್ಗೆ ೭ ಗಂಟೆಯಿಂದ ಆರಂಭಗೊಂಡಿದ್ದು, ಸಂಜೆ ೬ ಗಂಟೆಯವರೆಗೆ ನಡೆಯಲಿದೆ. ಎರಡನೇ ಹಂತದಲ್ಲಿ ಮತದಾನ ನಡೆಯುವ ವಿಧಾನಸಭಾ ಕ್ಷೇತ್ರಗಳು ಕೋಲ್ಕತ್ತಾ ಉತ್ತರ, ಕೋಲ್ಕತ್ತಾ ದಕ್ಷಿಣ, ಹೌರಾ, ನಾಡಿಯಾ, ಉತ್ತರದ ೨೪ ಪರಗಣಗಳು, ದಕ್ಷಿಣದ ೨೪ ಪರಗಣಗಳು, ಹೂಗ್ಲಿ ಮತ್ತು ಪುರ್ಬಾ ಬರ್ಧಮಾನ್ ಸೇರಿದಂತೆ ಎಂಟು ಜಿಲ್ಲೆಗಳನ್ನು ಒಳಗೊಂಡಿವೆ. ಈ ಹಂತದಲ್ಲಿ ೧೪೨ ವಿಧಾನಸಭಾ ಸ್ಥಾನಗಳಿಗೆ ಒಟ್ಟು ಒಂದು ಸಾವಿರದ ೪೪೮ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ೩.೨೨ ಕೋಟಿಗೂ ಹೆಚ್ಚು ಮತದಾರರು ತಮ್ಮ ಮತದಾನದ ಹಕ್ಕು ಚಲಾಯಿಸಲು ಅರ್ಹರಾಗಿದ್ದಾರೆ. ಅವರಲ್ಲಿ ೪.೧೨ ಲಕ್ಷಕ್ಕೂ ಹೆಚ್ಚು ಮತದಾರರು ೧೮ ರಿಂದ ೧೯ ವರ್ಷ ವಯಸ್ಸಿನ ಮೊದಲ ಬಾರಿಗೆ ಮತದಾರರಾಗಿದ್ದಾರೆ. ಸುಮಾರು ೩ ಸಾವಿರದ ೨೦೦ ಮತದಾರರು ೧೦೦ ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನವರಾಗಿದ್ದಾರೆ. ಕೇರಳ, ಅಸ್ಸಾಂ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಒಂದು ಕೇಂದ್ರಾಡಳಿತ ಪ್ರದೇಶ ಪುದುಚೇರಿಯ ಎಲ್ಲಾ ನಾಲ್ಕು ರಾಜ್ಯಗಳ ಮತ ಎಣಿಕೆ ಮೇ ೪ ರಂದು ನಡೆಯಲಿದೆ.

**********

ಮತದಾರರ ಗುರುತಿನ ಚೀಟಿ ಇಲ್ಲದ ಮತದಾರರು ಆಧಾರ್, ಪ್ಯಾನ್, ಚಾಲನಾ ಪರವಾನಗಿ, ಪಾಸ್‌ಪೋರ್ಟ್, ಛಾಯಾಚಿತ್ರಗಳೊಂದಿಗೆ ಪಿಂಚಣಿ ಪತ್ರಗಳು ಅಥವಾ ಬ್ಯಾಂಕ್‌ಮತ್ತು ಅಂಚೆ ಕಚೇರಿಗಳ ಫೋಟೋಗಳೊಂದಿಗೆ ಪಾಸ್‌ಬುಕ್‌ಗಳಂತಹ ೧೨ ಪರ್ಯಾಯ ದಾಖಲೆಗಳಲ್ಲಿ ಒಂದನ್ನು ಪ್ರಸ್ತುತಪಡಿಸುವ ಮೂಲಕ ಮತ ಚಲಾಯಿಸಬಹುದು ಎಂದು ಚುನಾವಣಾ ಆಯೋಗ ಘೋಷಿಸಿದೆ.

ಈ ನಡುವೆ, ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯಲ್ಲಿಂದು ದಾಖಲೆ ಸಂಖ್ಯೆಯಲ್ಲಿ ಮತ ಚಲಾಯಿಸುವಂತೆ ಪ್ರಧಾನಿ ನರೇಂದ್ರ ಮೋದಿ ಜನತೆಯಲ್ಲಿ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪಶ್ಚಿಮ ಬಂಗಾಳದ ಮಹಿಳೆಯರು ಮತ್ತು ಯುವಕರು, ವಿಶೇಷವಾಗಿ, ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವುದು ಮತ್ತು ತಮ್ಮ ಹಕ್ಕು ಚಲಾಯಿಸುವುದು ಮುಖ್ಯ ಎಂದು ಅವರು ಹೇಳಿದ್ದಾರೆ.

**********

ಉತ್ತರ ಪ್ರದೇಶಕ್ಕೆ ಎರಡು ದಿನಗಳ ಭೇಟಿಯ ಎರಡನೇ ದಿನವಾದ ಇಂದು ಪ್ರಧಾನಿ ನರೇಂದ್ರ ಮೋದಿ ಅವರು ಹಾರ್ದೋಯ್‌ನಲ್ಲಿ ಗಂಗಾ ಎಕ್ಸ್‌ಪ್ರೆಸ್‌ವೇಯನ್ನು ಉದ್ಘಾಟಿಸಲಿದ್ದಾರೆ. ನಂತರ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಗಂಗಾ ಎಕ್ಸ್‌ಪ್ರೆಸ್‌ವೇ ೫೯೪ ಕಿಲೋಮೀಟರ್ ಉದ್ದದ, ೬-ಲೇನ್‌ಗಳ, ಪ್ರವೇಶ-ನಿಯಂತ್ರಿತ ಗ್ರೀನ್‌ಫೀಲ್ಡ್ ಹೈ-ಸ್ಪೀಡ್ ಕಾರಿಡಾರ್ ಆಗಿದೆ. ಇದನ್ನು ಸುಮಾರು ೩೬ ಸಾವಿರದ ೨೩೦ ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾಗಿದೆ. ಉತ್ತರ ಪ್ರದೇಶ ಎಕ್ಸ್‌ಪ್ರೆಸ್‌ವೇಸ್ ಕೈಗಾರಿಕಾ ಅಭಿವೃದ್ಧಿ ಪ್ರಾಧಿಕಾರವು ಅಭಿವೃದ್ಧಿಪಡಿಸಿದ ಗಂಗಾ ಎಕ್ಸ್‌ಪ್ರೆಸ್‌ವೇ ಉತ್ತರ ಪ್ರದೇಶದ ಪಶ್ಚಿಮ, ಮಧ್ಯ ಮತ್ತು ಪೂರ್ವ ಪ್ರದೇಶಗಳನ್ನು ಒಂದೇ ಹೈ-ಸ್ಪೀಡ್ ಕಾರಿಡಾರ್ ಮೂಲಕ ಸಂಪರ್ಕಿಸುತ್ತದೆ. ಇದು ರಾಜ್ಯದ ಅತಿ ಉದ್ದದ ಎಕ್ಸ್‌ಪ್ರೆಸ್‌ವೇ ಆಗಿರುತ್ತದೆ. ಇದು ಮೀರತ್ ಮತ್ತು ಪ್ರಯಾಗ್‌ರಾಜ್ ನಡುವಿನ ಪ್ರಯಾಣದ ಸಮಯವನ್ನು ಸುಮಾರು ೧೨ ಗಂಟೆಗಳಿಂದ ೬ ಗಂಟೆಗಳವರೆಗೆ ಕಡಿಮೆ ಮಾಡುತ್ತದೆ. ಈ ಎಕ್ಸ್‌ಪ್ರೆಸ್‌ವೇ ೧೨ ಜಿಲ್ಲೆಗಳ ಮೂಲಕ ಹಾದು ಹೋಗುತ್ತದೆ. ಮೀರತ್, ಹಾಪುರ್, ಬುಲಂದ್‌ಶಹರ್, ಅಮ್ರೋಹಾ, ಸಂಭಾಲ್, ಬುಡೌನ್, ಶಹಜಹಾನ್‌ಪುರ, ಹಾರ್ದೋಯ್, ಉನ್ನಾವೋ, ರಾಯ್‌ಬರೇಲಿ, ಪ್ರತಾಪ್‌ಗಢ ಮತ್ತು ಪ್ರಯಾಗ್‌ರಾಜ್. ಈ ಎಕ್ಸ್‌ಪ್ರೆಸ್‌ವೇ ಶಹಜಹಾನ್‌ಪುರದಲ್ಲಿ ೩.೫ ಕಿಮೀ ಉದ್ದದ ವಾಯುನೆಲೆಯನ್ನು ಹೊಂದಿದ್ದು, ಭಾರತೀಯ ವಾಯುಪಡೆಯ ವಿಮಾನಗಳ ತುರ್ತು ಟೇಕ್‌ಆಫ್ ಮತ್ತು ಲ್ಯಾಂಡಿಂಗ್‌ಗೆ ಸಹಾಯ ಮಾಡುತ್ತದೆ.

ಈ ಎಕ್ಸ್‌ಪ್ರೆಸ್‌ವೇ ಯೋಜನೆಯು ಕೈಗಾರಿಕಾ ಅಭಿವೃದ್ಧಿ, ವ್ಯಾಪಾರ, ಕೃಷಿ, ಪ್ರವಾಸೋದ್ಯಮ ಸೇರಿದಂತೆ ಬಹು ವಲಯಗಳಿಗೆ ಉತ್ತೇಜನ ನೀಡುತ್ತದೆ ಮತ್ತು ಈ ಪ್ರದೇಶದಾದ್ಯಂತ ನೇರ-ಪರೋಕ್ಷ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತದೆ ಎಂದು ನಿರೀಕ್ಷಿಸಲಾಗಿದೆ.

**********

ಪ್ರತಿಕೂಲ ಹವಾಮಾನ ಪರಿಸ್ಥಿತಿಯಿಂದಾಗಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ರೋಹ್ತಾಂಗ್‌ನ ಅಟಲ್ ಸುರಂಗಮಾರ್ಗಕ್ಕೆ ನೀಡಬೇಕಿದ್ದ ಭೇಟಿಯನ್ನು ರದ್ದುಗೊಳಿಸಲಾಗಿದೆ. ಅಧಿಕೃತ ಮೂಲಗಳ ಪ್ರಕಾರ, ನಿರಂತರವಾಗಿ ಹದಗೆಡುತ್ತಿರುವ ಹವಾಮಾನ, ಬಲವಾದ ಗಾಳಿ ಮತ್ತು ಈ ಪ್ರದೇಶದಲ್ಲಿ ಮಳೆ ಹಾಗೂ ಹಿಮಪಾತವಾಗುವ ಸಾಧ್ಯತೆಯಿಂದಾಗಿ ಭದ್ರತಾ ಕಾರಣಗಳಿಗಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

**********

ಈ ತಿಂಗಳ ೨೫ರಂದು ಭಾರತವು ತನ್ನ ಸಾರ್ವಕಾಲಿಕ ಗರಿಷ್ಠ ವಿದ್ಯುತ್ ಬೇಡಿಕೆಯಾದ ೨೫೬ ಗಿಗಾವ್ಯಾಟ್‌ಗಿಂತ ಹೆಚ್ಚಿನ ಮಟ್ಟವನ್ನು ಯಶಸ್ವಿಯಾಗಿ ಪೂರೈಸಿದೆ. ನೆರೆಯ ರಾಷ್ಟ್ರಗಳಿಗೆ ವಿದ್ಯುತ್ ರಫ್ತುಗಳನ್ನು ಏಕಕಾಲದಲ್ಲಿ ನಿರ್ವಹಿಸುವಾಗ ಬೇಡಿಕೆಯನ್ನು ಪೂರೈಸಲಾಗಿದೆ ಎಂದು ವಿದ್ಯುತ್ ಸಚಿವಾಲಯ ಹೇಳಿದೆ. ಈ ಮೈಲಿಗಲ್ಲು ಮೇ ೨೦೨೪ ರಲ್ಲಿ ದಾಖಲಾದ ಹಿಂದಿನ ಸಾರ್ವಕಾಲಿಕ ಗರಿಷ್ಠ ೨೫೦ ಗಿಗಾವ್ಯಾಟ್‌ಗಳನ್ನು ಮೀರಿದೆ. ಉಷ್ಣ, ಜಲ, ಪರಮಾಣು ಮತ್ತು ನವೀಕರಿಸಬಹುದಾದ ಇಂಧನ ಸೇರಿದಂತೆ ವೈವಿಧ್ಯಮಯ ಉತ್ಪಾದನಾ ಮೂಲಗಳ ಮೂಲಕ ಅಗತ್ಯವನ್ನು ಪೂರೈಸಲಾಗಿದೆ. ಇದು ವಿಶ್ವಾಸಾರ್ಹತೆ ಮತ್ತು ಗ್ರಿಡ್ ಸ್ಥಿರತೆಯನ್ನು ಖಚಿತಪಡಿಸುತ್ತದೆ. ನವೀಕರಿಸಬಹುದಾದ ಶಕ್ತಿ, ವಿಶೇಷವಾಗಿ ಸೌರಶಕ್ತಿ, ಗರಿಷ್ಠ ಪರಿಸ್ಥಿತಿಗಳಲ್ಲಿ ಜಲ ಮತ್ತು ಇತರ ಹೊಂದಿಕೊಳ್ಳುವ ಸಂಪನ್ಮೂಲಗಳಿಂದ ಪೂರಕವಾಗಿದೆ ಎಂದು ಸಚಿವಾಲಯ ಮಾಹಿತಿ ಹಂಚಿಕೊಂಡಿದೆ.

**********

ಕಾರ್ಯಪಡೆಯಲ್ಲಿ ಮಹಿಳೆಯರ ಸಮಾನ ಭಾಗವಹಿಸುವಿಕೆ ಸಾಮಾಜಿಕ ಮತ್ತು ಆರ್ಥಿಕ ಅವಶ್ಯಕತೆಯಾಗಿದ್ದು, ಮಹಿಳಾ ಸಬಲೀಕರಣ ವಿಕಸಿತ ಭಾರತವನ್ನು ನಿರ್ಮಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಸಚಿವರು, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಹೊಸ ಕಾರ್ಮಿಕ ಸಂಹಿತೆಗಳು ಗಿಗ್ ಮತ್ತು ವೇದಿಕೆ ಕಾರ್ಮಿಕರಿಗೆ ಮೊದಲ ಬಾರಿಗೆ ಔಪಚಾರಿಕ ಗುರುತನ್ನು ನೀಡಿವೆ. ಈ ಐತಿಹಾಸಿಕ ಹೆಜ್ಜೆ ಅವರನ್ನು ಬಲವಾದ ಸಾಮಾಜಿಕ ಭದ್ರತಾ ಜಾಲದ ಅಡಿಯಲ್ಲಿ ತರುವ ಮೂಲಕ ಅವರ ಆರ್ಥಿಕ ಭವಿಷ್ಯವನ್ನು ಭದ್ರಪಡಿಸುತ್ತದೆ ಎಂದು ಹೇಳಿದರು.೨೦೧೭-೧೮ರಲ್ಲಿ ಶೇಕಡ ೨೩ರಷ್ಟಿದ್ದ ಮಹಿಳಾ ಕಾರ್ಮಿಕ ಪಡೆ ಭಾಗವಹಿಸುವಿಕೆಯ ಪ್ರಮಾಣ ೨೦೨೫ ರಲ್ಲಿ ಶೇಕಡ ೪೦ಕ್ಕೆ ಏರಿದೆ ಎಂದು ಸಚಿವರು ಮಾಹಿತಿ ನೀಡಿದರು.

**********

ಪ್ರಧಾನಿ ನರೇಂದ್ರ ಮೋದಿಯವರ ಮೇಕ್ ಇನ್ ಇಂಡಿಯಾ ದೃಷ್ಟಿಕೋನದಡಿಯಲ್ಲಿ ದೇಶವು ವಿಶ್ವಾಸಾರ್ಹ ಜಾಗತಿಕ ಎಲೆಕ್ಟ್ರಾನಿಕ್ಸ್-ಉತ್ಪಾದನಾ ಪಾಲುದಾರನಾಗಿ ವೇಗವಾಗಿ ಹೊರಹೊಮ್ಮುತ್ತಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಅವರೊಂದಿಗೆ ವಿಶಾಖಪಟ್ಟಣಂನಲ್ಲಿ ನಡೆದ ಗೂಗಲ್ ಕ್ಲೌಡ್ ಇಂಡಿಯಾ ಎಐ ಹಬ್‌ಗೆ ಶಂಕುಸ್ಥಾಪನೆ ನೆರವೇರಿಸಿದರು.ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ದೇಶವು ದೊಡ್ಡ ಪ್ರಮಾಣದ ಎಲೆಕ್ಟ್ರಾನಿಕ್ಸ್ ಉತ್ಪಾದನೆ, ಸೆಮಿಕಂಡಕ್ಟರ್ ಉತ್ಪಾದನೆ, ಸುಧಾರಿತ ಚಿಪ್ ವಿನ್ಯಾಸ ಮತ್ತು ಕೃತಕ ಬುದ್ಧಿಮತ್ತೆ ತಂತ್ರಜ್ಞಾನಗಳೊಂದಿಗೆ ಮುಂದುವರಿಯುತ್ತಿದೆ ಎಂದು ಹೇಳಿದರು. ಕೇಂದ್ರೀಕೃತ ನೀತಿ ಬೆಂಬಲ ಮತ್ತು ಬಲವಾದ ರಾಜಕೀಯ ನಾಯಕತ್ವವು ಇತ್ತೀಚಿನ ವರ್ಷಗಳಲ್ಲಿ ವಲಯವನ್ನು ಗಮನಾರ್ಹವಾಗಿ ಪರಿವರ್ತಿಸಿದೆ. ಸ್ಮಾರ್ಟ್ ಫೋನ್‌ಗಳು ಈಗ ದೇಶದ ಏಕೈಕ ಅತಿದೊಡ್ಡ ರಫ್ತು ಉತ್ಪನ್ನವಾಗಿದೆ. ಇದು ಎಲೆಕ್ಟ್ರಾನಿಕ್ಸ್ ಉತ್ಪಾದನೆ ಮತ್ತು ಜಾಗತಿಕ ಪೂರೈಕೆ ಸರಪಳಿಗಳಲ್ಲಿ ದೇಶದ ಬೆಳೆಯುತ್ತಿರುವ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

ದೇಶವು ಮಾಡ್ಯೂಲ್‌ಗಳು, ಸಿದ್ಧಪಡಿಸಿದ ಉತ್ಪನ್ನಗಳು, ಘಟಕಗಳು, ಸರ್ವರ್‌ಗಳು ಮತ್ತು ಸುಧಾರಿತ ಎಲೆಕ್ಟ್ರಾನಿಕ್ ಉಪಕರಣಗಳನ್ನು ಗುಣಮಟ್ಟ ಮತ್ತು ಸ್ಪರ್ಧಾತ್ಮಕ ವೆಚ್ಚಗಳೊಂದಿಗೆ ತಯಾರಿಸಲು ಸಮರ್ಥವಾಗಿದೆ ಎಂದು ಅವರು ಹೇಳಿದರು. ಅಮರಾವತಿಯನ್ನು ಹೈದರಾಬಾದ್ ಮತ್ತು ಚೆನ್ನೈನೊಂದಿಗೆ ಸಂಪರ್ಕಿಸುವ ಹೈಸ್ಪೀಡ್ ಬುಲೆಟ್ ರೈಲು ಸಂಪರ್ಕದ ಯೋಜನೆಗಳನ್ನು ಈ ಸಂದರ್ಭದಲ್ಲಿ ಅವರು ಪ್ರಸ್ತಾಪಿಸಿದದರು. ಪ್ರಸ್ತುತ ರಾಜ್ಯಾದ್ಯಂತ ಒಂದು ಲಕ್ಷ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೌಲ್ಯದ ರೈಲ್ವೆ ಯೋಜನೆಗಳು ಅನುಷ್ಠಾನ ಹಂತದಲ್ಲಿವೆ ಎಂದು ಅವರು ಹೇಳಿದರು.

**********

ಶಿಕ್ಷಣ ಹಕ್ಕು ಕಾಯ್ದೆಯಡಿ ವಿದ್ಯಾರ್ಥಿಗಳ ಕಡ್ಡಾಯ ಪ್ರವೇಶವನ್ನು ಸುಪ್ರೀಂಕೋರ್ಟ್ ಎತ್ತಿಹಿಡಿದಿದೆ. ಇದನ್ನು ರಾಷ್ಟ್ರೀಯ ಧ್ಯೇಯ ಎಂದು ಕರೆದಿದೆ. ಖಾಸಗಿ ಅನುದಾನರಹಿತ ಸಂಸ್ಥೆಗಳು ಸೇರಿದಂತೆ ನೆರೆಹೊರೆಯ ಶಾಲೆಗಳು ರಾಜ್ಯ ಸರ್ಕಾರವು ನಿಗದಿಪಡಿಸಿದ ವಿದ್ಯಾರ್ಥಿಗಳನ್ನು ವಿಳಂಬವಿಲ್ಲದೆ ಶಾಲೆಗೆ ಪ್ರವೇಶಿಸಲು ಕಾನೂನುಬದ್ಧವಾಗಿ ಇದು ದೃಢಪಡಿಸುತ್ತದೆ ಎಂದು ನ್ಯಾಯಾಲಯ ಹೇಳಿದೆ. ದುರ್ಬಲ ಮತ್ತು ಹಿಂದುಳಿದ ವರ್ಗಗಳ ಮಕ್ಕಳಿಗೆ ಪ್ರವೇಶ ನಿರಾಕರಿಸುವುದು ಸಂವಿಧಾನದ ೨೧ಎ ವಿಧಿಯ ಅಡಿಯಲ್ಲಿ ಅವರ ಶಿಕ್ಷಣದ ಮೂಲಭೂತ ಹಕ್ಕನ್ನು ಉಲ್ಲಂಘಿಸುತ್ತದೆ ಎಂದು ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಅಲೋಕ್ ಆರಾಧೆ ಅವರ ಪೀಠವು ಪ್ರತಿಪಾದಿಸಿದೆ.

**********

ಈಕ್ವೆಡಾರ್‌ನ ವಿದೇಶಾಂಗ ವ್ಯವಹಾರ ಸಚಿವರಾದ ಗೇಬ್ರಿಯೆಲಾ ಸೊಮ್ಮರ್‌ಫೆಲ್ಡ್ ಅವರು ಇಂದಿನಿಂದ ಮೂರು ದಿನಗಳ ಕಾಲ ಭಾರತ ಭೇಟಿ ನೀಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಈ ಸಂದರ್ಭದಲ್ಲಿ ಅವರು, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿ ಮಾಡಲಿದ್ದಾರೆ. ನಂತರ, ಅವರು ರಾಜ್‌ಘಾಟ್‌ನಲ್ಲಿರುವ ಮಹಾತ್ಮ ಗಾಂಧೀಜಿ ಸಮಾಧಿಗೆ ನಮನ ಸಲ್ಲಿಸಲಿದ್ದಾರೆ.

ಅವರು, ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ, ಪಿಯೂಷ್ ಗೋಯಲ್ ಮತ್ತು ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವೆ ಪಬಿತ್ರಾ ಮಾರ್ಗರಿಟಾ ಅವರನ್ನು ಭೇಟಿ ಮಾಡಲಿದ್ದಾರೆ.

**********

ಚಂಡೀಗಢದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ, ರಾಜಸ್ಥಾನ ರಾಯಲ್ಸ್ ತಂಡವು ಪಂಜಾಬ್ ಕಿಂಗ್ಸ್ ತಂಡವನ್ನು ಆರು ವಿಕೆಟ್‌ಗಳಿಂದ ಸೋಲಿಸಿತು. ಪಂಜಾಬ್ ಕಿಂಗ್ಸ್ ನಿಗದಿಪಡಿಸಿದ ೨೨೩ ರನ್‌ಗಳ ಗುರಿಯನ್ನು ಬೆನ್ನಟ್ಟಿದ ರಾಜಸ್ಥಾನ ರಾಯಲ್ಸ್ ೧೯.೨ ಓವರ್‌ಗಳಲ್ಲಿ ೪ ವಿಕೆಟ್‌ಗಳಿಗೆ ೨೨೮ ರನ್ ಗಳಿಸಿತು. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಸೆಣಸಲಿದೆ. ಪಂದ್ಯವು ರಾತ್ರಿ ೦೭.೩೦ ಕ್ಕೆ ಆರಂಭವಾಗಲಿದೆ.

**********